# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 19
2. ಸದಸ್ಯರ ಹೆಸರು : ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸುವ ದಿನಾಂಕ : 12.07.2018
4. ಉತ್ತರಿಸುವ ಸಚಿವರು : ಮುಖ್ಯಮಂತ್ರಿ

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದ ಆಡಳಿತಕ್ಕೆ ಬೇಕಾದ ದಕ್ಷ ಅಧಿಕಾರಿಗಳನ್ನು ಆಯ್ಕೆ ಮಾಡುವ ಕರ್ನಾಟಕ ಲೋಕಸೇವಾ ಆಯೋಗದಲ್ಲಿ ಭ್ರಷ್ಟಾಚಾರ, ಲಂಚಗುಳಿತನ, ಸ್ವಜನ ಪಕ್ಷಪಾತದ ಆರೋಪವಿದ್ದು ಈ ಬಗ್ಗೆ ಕ್ರಮಕೈಗೊಳ್ಳಲು ಸರ್ಕಾರ ಏನು ಕ್ರಮ ಜರುಗಿಸಿದೆ; | ಕರ್ನಾಟಕ ರಾಜ್ಯ ಸೇವೆಗಳಲ್ಲಿನ ಹುದ್ದೆಗಳಿಗೆ ಮತ್ತು ಸೇವೆಗಳಿಗೆ ಆಯ್ಕೆ ಮಾಡುವಲ್ಲಿ ಮುಕ್ತ, ನಿಷ್ಪಕ್ಷಪಾತವಾದ ಮತ್ತು ಅರ್ಹತೆ ಆಧಾರಿತ ಆಯ್ಕೆಗಳನ್ನು ಮಾಡಲು ಕರ್ನಾಟಕ ಲೋಕಸೇವಾ ಆಯೋಗದಲ್ಲಿ ಜಾರಿಯಲ್ಲಿದ್ದ ವ್ಯವಸ್ಥೆ ಮತ್ತು ಪ್ರಕ್ರಿಯೆಗಳನ್ನು ಪರಿಷ್ಕರಿಸುವ ಉದ್ದೇಶದಿಂದ ಕೇಂದ್ರ ಲೋಕಸೇವಾ ಆಯೋಗದ ನಿವೃತ್ತ ಅಧ್ಯಕ್ಷರಾದ ಶ್ರೀ ಪಿ.ಸಿ.ಹೋಟಾ, ಭಾ.ಆ.ಸೇ.(ನಿ) ಇವರ ಅಧ್ಯಕ್ಷತೆಯಲ್ಲಿ ಒಂದು ಸಮಿತಿಯನ್ನು ರಚಿಸಲಾಗಿದ್ದು, ಸದರಿ ಸಮಿತಿಯು ನೀಡಿರುವ ಶಿಫಾರಸ್ಸುಗಳಲ್ಲಿ ಕೆಲವೊಂದು ಶಿಫಾರಸ್ಸುಗಳನ್ನು ಹೊರತುಪಡಿಸಿ/ಮಾರ್ಪಡಿಸಿ ಕ್ರಮ ಕೈಗೊಳ್ಳಲಾಗಿರುತ್ತದೆ. |
| ಆ. | ಇತ್ತೀಚೆಗೆ ಎಸ್.ಡಿ.ಎ ಮತ್ತು ಎಫ್.ಡಿ.ಎ ನೇಮಕಾತಿ ಅಕ್ರಮ ವಿಚಾರದಲ್ಲಿ 12 ಜನರನ್ನು ಬಂಧಿಸಿರುವುದು ನಿಜವೇ; (ವಿವರ ನೀಡುವುದು) | ಎಸ್.ಡಿ.ಎ ಮತ್ತು ಎಫ್.ಡಿ.ಎ. ನೇಮಕಾತಿ ಅಕ್ರಮ ವಿಚಾರಕ್ಕೆ ಸಂಬಂಧಿಸಿದಂತೆ ಕಲಬುರಗಿ ಜಿಲ್ಲೆಯ ಅಶೋಕ ನಗರ ಪೊಲೀಸ್ ಠಾಣೆ ಮೊ.ಸಂ. 19/2018 ಕಲಂ 406, 409, 120ಬಿ, 420 ರೆ/ವಿ 149 ಐಪಿಸಿ. ಪ್ರಕರಣ ದಿ:26-02-2018 ರಂದು ಮತ್ತು ರೋಜಾ ಪೊಲೀಸ್ ಠಾಣೆ ಮೊ.ಸಂ. 24/2018 ಕಲಂ 406, 417, 188, 420 ಐಪಿಸಿ. ರೀತ್ಯಾ ಪ್ರಕರಣ ದಿ:26-02-2018 ರಂದು 2 ಪ್ರಕರಣಗಳನ್ನು ದಾಖಲಿಸಲಾಗಿದೆ.<br>1) ಕಲಬುರಗಿ ಜಿಲ್ಲೆಯ ರೋಜಾ ಪೊಲೀಸ್ ಠಾಣೆ ಮೊ.ಸಂ. 24/2018ರ ಪ್ರಕರಣದಲ್ಲಿ ಒಟ್ಟು 15 ಜನ ಆರೋಪಿಗಳಿದ್ದು, ಎಲ್ಲಾ ಆರೋಪಿಗಳನ್ನು ಬಂಧಿಸಲಾಗಿದೆ. ಪ್ರಸ್ತುತ ಈ ಪ್ರಕರಣವು ತನಿಖೆಯಲ್ಲಿರುತ್ತದೆ.<br>2) ಕಲಬುರಗಿ ಜಿಲ್ಲೆಯ ಅಶೋಕ ನಗರ ಪೊಲೀಸ್ ಠಾಣೆ ಮೊ.ಸಂ. 19/2018 ರ ಪ್ರಕರಣದಲ್ಲಿ ಒಟ್ಟು 20 ಆರೋಪಿಗಳನ್ನು ಗುರುತಿಸಿದ್ದು, ಈ 20 ಆರೋಪಿಗಳಲ್ಲಿ 14 ಜನ ಆರೋಪಿಗಳನ್ನು ಬಂಧಿಸಲಾಗಿರುತ್ತದೆ. ಈ ಬಂಧಿತ ಆರೋಪಿಗಳು ರೋಜಾ ಪೊಲೀಸ್ ಠಾಣೆಯ ಪ್ರಕರಣದಲ್ಲೂ ಆರೋಪಿಗಳಾಗಿರುತ್ತಾರೆ. ಉಳಿದ 6 ಜನ ಆರೋಪಿಗಳು ತಲೆಮರೆಸಿಕೊಂಡಿರುತ್ತಾರೆ.<br>ಅಶೋಕ ನಗರ ಪೊಲೀಸ್ ಠಾಣೆಯ ಪ್ರಕರಣದಲ್ಲಿ ತನಿಖೆಯನ್ನು ಪೂರ್ಣಗೊಳಿಸಿ, 20 ಜನ ಆರೋಪಿಗಳ ವಿರುದ್ಧ ಮಾನ್ಯ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಲಾಗಿದ್ದು, ಪ್ರಕರಣವು ಹಾಲಿ ಸಿ.ಸಿ. ಸಂಖ್ಯೆ 3225/18 ರಲ್ಲಿ ಮಾನ್ಯ ನ್ಯಾಯಾಲಯದ ವಿಚಾರಣೆಯಲ್ಲಿರುತ್ತದೆ. |

| | | |
|---|---|---|
| ಇ. | ಪಿ.ಸಿ. ಹೋಟಾ ಸಮಿತಿ ಕೊಟ್ಟಿರುವ ವರದಿಯಂತೆ 67 ಶಿಫಾರಸ್ಸುಗಳನ್ನು ಅನುಷ್ಠಾನ ಮಾಡಿದ್ದರೆ, ಭ್ರಷ್ಟಾಚಾರ ನಿಯಂತ್ರಣಕ್ಕೆ ಬರುತ್ತಿತ್ತು ಎಂಬ ಮಾಹಿತಿ ಸರಕಾರಕ್ಕಿದೆಯೇ; | ಕೇಂದ್ರ ಲೋಕಸೇವಾ ಆಯೋಗದ ನಿವೃತ್ತ ಅಧ್ಯಕ್ಷರಾದ ಶ್ರೀ ಪಿ.ಸಿ.ಹೋಟಾ, ಭಾ.ಆ.ಸೇ.(ನಿ) ಇವರ ಅಧ್ಯಕ್ಷತೆಯಲ್ಲಿ ಸರ್ಕಾರವು ರಚಿಸಿರುವ ಸಮಿತಿಯು ಮಾಡಿರುವ ಒಟ್ಟು ಶಿಫಾರಸ್ಸುಗಳಲ್ಲಿ ಸಚಿವ ಸಂಪುಟದ ಅನುಮೋದನೆಯೊಂದಿಗೆ ಕೆಲವೊಂದು ಶಿಫಾರಸ್ಸುಗಳನ್ನು ಹೊರತುಪಡಿಸಿ/ಮಾರ್ಪಡಿಸಿ ಕ್ರಮ ಕೈಗೊಳ್ಳಲಾಗಿರುತ್ತದೆ ಹಾಗೂ ಕೆಲವೊಂದು ಶಿಫಾರಸ್ಸು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ. |

ಸಂಖ್ಯೆ: ಸಿಆಸುಇ 58 ಸೇಲೋಆ 2018

(ಹೆಚ್.ಡಿ. ಕುಮಾರಸ್ವಾಮಿ)
ಮುಖ್ಯಮಂತ್ರಿ